KARNATAKA NURSING & PARAMEDICAL SCIENCES EDUCATION (REGULATION) AUTHORITY
ಕರ್ನಾಟಕ ನರ್ಸಿಂಗ್ ಹಾಗೂ ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ

**PARA MEDICAL BOARD**

# 40/20A, Lakshmi Complex, First Floor, Opp. Vani Vilas Hospital, Fort, Bengaluru-560002

**Ph No**: 080-26702159 **Email**: pmboffice97@gmail.com / pmbexamination@gmail.com

**Ref No: PMB/2024-25** **Date: 04/04/2024**

## ಸುತ್ತೋಲೆ

**ವಿಷಯ:** ಕರ್ನಾಟಕ ರಾಜ್ಯದ ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದ ವಿಶ್ವವಿದ್ಯಾಲಯ/ಕಾಲೇಜುಗಳಲ್ಲಿ ವ್ಯಾಸಾಂಗ ಮಾಡುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಡೆಯದಿರುವ ಬಗ್ಗೆ.

**ಉಲ್ಲೇಖ:** 1 ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಕಿ 198 ಪಕವಿ 2023 ದಿ.06.02.2024

2. DME/DN2/33/2024 E 1351542 ದಿನಾಂಕ: 25.03.2024

* * * * *

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ. ಸದರಿ ಉಲ್ಲೇಖಿತ ಸರ್ಕಾರದ ಆದೇಶ ಪತ್ರದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಿಶ್ವವಿದ್ಯಾನಿಲಯ, ವಿದ್ಯಾಸಂಸ್ಥೆ ಹಾಗೂ ವೈದ್ಯಕೀಯ ಕಾಲೇಜುಗಳಿಗೆ ಪ್ರವೇಶ ಪಡೆಯುವ ಸಂದರ್ಭದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ Freeship Card ನಲ್ಲಿನ ದೃಢೀಕರಣದಂತೆ ಯಾವುದೇ ಕಡ್ಡಾಯ ಶುಲ್ಕಗಳನ್ನು (ಮರುಪಾವತಿ ಮಾಡಲಾಗುವ Deposit ಗಳನ್ನು ಹೊರತುಪಡಿಸಿ) ಪಾವತಿ ಮಾಡಿಸಿಕೊಳ್ಳದೇ ಉಚಿತವಾಗಿ ಪ್ರವೇಶ ಕಲ್ಪಿಸಲು ಈ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಆದೇಶಿಸಿದೆ.

1. ಕುಟುಂಬದ ವಾರ್ಷಿಕ ಆದಾಯ ಮಿತಿ ರೂ.2.50 ಲಕ್ಷದೊಳಗಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಆಯಾ ಆಯಾ ವೈದ್ಯಕೀಯ ಕೋರ್ಸ್ ನ ಒಟ್ಟಾರೆ ಕೋರ್ಸ್ ಅವಧಿಯಲ್ಲಿ ಪ್ರತಿ ವರ್ಷ ಪ್ರವೇಶಾತಿ ಸಮಯದಲ್ಲಿ University Fee ಹಾಗೂ ಮರುಪಾವತಿ ಮಾಡಲಾಗುವ Deposit ಗಳನ್ನು ಹೊರತುಪಡಿಸಿ, ವೈದ್ಯಕೀಯ ಶಿಕ್ಷಣ ಇಲಾಖೆ ನಿಗಧಿಪಡಿಸಿರುವ ಭೋಧನಾ ಶುಲ್ಕ ಸೇರಿದಂತೆ ಇತರೆ ಶುಲ್ಕಗಳನ್ನು ಕಡ್ಡಾಯವಾಗಿ ಒತ್ತಾಯ ಮಾಡತಕ್ಕದ್ದಲ್ಲ.
2. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರಾಗುವ ಶುಲ್ಕದ ಮೊತ್ತವನ್ನು ವಿದ್ಯಾರ್ಥಿಯು ಇತರೆ ಯಾವುದೇ ವಿಷಯಗಳಿಗೆ ಖರ್ಚು ಭರಿಸದೇ, ಕಡ್ಡಾಯವಾಗಿ ಕಾಲೇಜಿಗೆ ಪಾವತಿ ಮಾಡಬೇಕಾಗಿರುತ್ತದೆ (ನಿರ್ವಹಣಾ ವೆಚ್ಚ ಹೊರತುಪಡಿಸಿ). ಸಮಾಜ ಕಲ್ಯಾಣ ಇಲಾಖೆಯು DBT ಮೂಲಕ ವಿದ್ಯಾರ್ಥಿಗಳಿಗೆ ಪಾವತಿಸಿದ ಬಗ್ಗೆ ಮಾಹಿತಿಯನ್ನು ಖಚಿತ ಪಡಿಸಿಕೊಂಡು ನಂತರ ವಿದ್ಯಾರ್ಥಿಯಿಂದ ವೈದ್ಯಕೀಯ ಶಿಕ್ಷಣ ಇಲಾಖೆ ನಿಗಧಿಪಡಿಸಿದ ಬೋಧನಾ ವೆಚ್ಚದ ಮೊತ್ತವನ್ನು ವಿದ್ಯಾರ್ಥಿಯಿಂದ ಪಾವತಿ ಮಾಡಿಸಿಕೊಳ್ಳುವುದು.
3. ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಉನ್ನತ ಶಿಕ್ಷಣದಲ್ಲಿ ವಂಚಿತರಾಗಬಾರದೆಂಬ ಉದ್ದೇಶದಿಂದ ವಿದ್ಯಾರ್ಥಿಯ ಅರೆ ವೈದ್ಯಕೀಯ ವಿದ್ಯಾಭ್ಯಾಸದ ಅವಧಿಯ ಎಲ್ಲಾ ಶೈಕ್ಷಣಿಕ ವರ್ಷದಲ್ಲಿ ಆಯಾ ಶೈಕಣಿಕ ವರ್ಷಕ್ಕೆ ಪ್ರವೇಶಾತಿ ಸಮಯದ ಆರಂಭದಲ್ಲಿಯೇ ವೈದ್ಯಕೀಯ ಶಿಕ್ಷಣ ಇಲಾಖೆ ನಿಗಧಿಪಡಿಸಿದ ಭೋಧನಾ ಶುಲ್ಕವನ್ನು ಪಾವತಿಸುವಂತೆ ಒತ್ತಾಯ ಮಾಡುವಂತಿಲ್ಲ.
4. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ(ಶುಲ್ಕ ಮರುಪಾವತಿ) ಮಾರ್ಗಸೂಚಿಯಲ್ಲಿ ಉಲ್ಲೇಖಿಸಿರುವಂತೆ, Freeship Card ಅನ್ನು ಮಾನ್ಯ ಮಾಡುವುದು ಎಲ್ಲಾ ಕಾಲೇಜುಗಳ ಜವಾಬ್ದಾರಿಯಾಗಿರುತ್ತದೆ. Freeship Card ನಲ್ಲಿ ವಿದ್ಯಾರ್ಥಿಯು ಸಲ್ಲಿಸಿರುವ ದೃಢೀಕರಣದಂತೆ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ (ಶುಲ್ಕ ಮರುಪಾವತಿ) ಮೊತ್ತ ಪಾವತಿಯಾದ ನಂತರದಲ್ಲಿ

ವಿದ್ಯಾರ್ಥಿಯಿಂದ ಕಡ್ಡಾಯವಾಗಿ ಭರಿಸಿಕೊಳ್ಳುವುದು. ಒಂದು ವೇಳೆ ವಿದ್ಯಾರ್ಥಿಯು ತನ್ನ ಖಾತೆಗೆ ವಿದ್ಯಾರ್ಥಿವೇತನ(ಶುಲ್ಕ ಮರುಪಾವತಿ)ಮೊತ್ತ ಜಮೆಯಾದ ನಂತರದಲ್ಲೂ ಕಾಲೇಜಿಗೆ ಶುಲ್ಕವನ್ನು ಮರುಪಾವತಿ ಮಾಡದೇ ಇದ್ದಲ್ಲಿ ಸಂಬಂಧಪಟ್ಟ ಕಾಲೇಜುಗಳು/ ಶಿಕ್ಷಣ ಸಂಸ್ಥೆಗಳು ಅಂತಹ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ಜಮೆ ಆಗಿರುವ ಬಗ್ಗೆ ದೃಢೀಕರಿಸಿಕೊಂಡು ಬೋಧನಾ ಶುಲ್ಕ ಪಾವತಿ ಮಾಡದೇ ಇರುವ ವಿದ್ಯಾರ್ಥಿಯ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳುವುದು.

ಮೇಲ್ಕಂಡ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿದೆ.

**ವಿಶೇಷಾಧಿಕಾರಿಗಳು**
ಕರ್ನಾಟಕ ನರ್ಸಿಂಗ್ ಮತ್ತು ಅರೆ ವೈದ್ಯಕೀಯ
ವಿಜ್ಞಾನಗಳ ಶಿಕ್ಷಣ(ನಿಯಂತ್ರಣ) ಪ್ರಾಧಿಕಾರ
ಬೆಂಗಳೂರು

**ಪ್ರತಿಯನ್ನು ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ:**

1. ಅರೆ ವೈದ್ಯಕೀಯ ಮಂಡಳಿಯಲ್ಲಿ ಸಂಯೋಜನೆಗೊಂಡಿರುವ ಎಲ್ಲಾ ಕಾಲೇಜಿನ ಪ್ರಾಂಶುಪಾಲರುಗಳಿಗೆ.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.